ಈ ಕಾರ್ಯಕ್ರಮಗಳನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಾರ್ಯಕ್ರಮಗಳು ಹಾಗೂ ಭಾರತ ಜನಸಂಖ್ಯಾ ಯೋಜನೆ-9ರಡಿಯಲ್ಲಿ ತೆಗೆದುಕೊಳ್ಳಲಾಗುತ್ತಿದೆ.

2. ಹೌದು. ಇದೊಂದು ನಿರಂತರ ಪ್ರಯತ್ನ.

3. ಇಲ್ಲಾ

ಚಿಂತಾಮಣಿ ಸರ್ಕಾರಿ ಪಾಲಿಟೆಕ್ನಿಕ್ ಕಟ್ಟಡ

375 (3477) ಶ್ರೀ ಚೌಡರೆಡ್ಡಿ (ಚಿಂತಾಮಣಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಂತಾಮಣಿ ಸರ್ಕಾರಿ ಪಾಲಿಟೆಕ್ನಿಕ್ ವಿದ್ಯಾರ್ಥಿನಿಲಯಕ್ಕೆ ಕಟ್ಟಡದ ಬಾಡಿಗೆಯನ್ನು ದಿನಾಂಕ : 01. 10. 1998 ರಿಂದ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ತಾಂತ್ರಿಕ ನಿರ್ದೇಶಕರು ದಿನಾಂಕ: 22. 1. 2000 ದಂದು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿ ಆದೇಶವನ್ನು ಕೋರಿದ್ದರೂ ಇದುವರೆವಿಗೂ ಸರ್ಕಾರ ಈ ದಿಸೆಯಲ್ಲಿ ಯಾವುದೇ ಸಕಾರಾತ್ಮಕ ಕ್ರಮವನ್ನು ಕೈಗೊಳ್ಳದೇ ಇದ್ದು, ಈ ಬಗ್ಗೆ ಕ್ರಮ ಕೈಗೊಳ್ಳುವುದೇ ?

ಡಾ॥ ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಈ ಬಗ್ಗೆ ಪರಿಶೀಲಿಸಲಾಗುತ್ತಿದ್ದು, ಕಟ್ಟಡದ ಬಾಡಿಗೆ ನೀಡಲು ಕ್ರಮ ಜರುಗಿಸಲಾಗುವುದು.

ಇ) ದಿನಾಂಕ 3.5.2000ದ ಚುಕ್ಕೆ ಗುರುತಿಲ್ಲದ ಪ್ರಶ್ನೋತ್ತರಗಳು

ಮಂಡ್ಯ ಜಿಲ್ಲಾ ಆಸ್ಪತ್ರೆಯ ಅಭಿವೃದ್ಧಿ

2724 (3438) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೆ.ಹೆಚ್.ಎಸ್.ಡಿ.ಪಿ ಅನ್ವಯ ಜಿಲ್ಲಾ ಆಸ್ಪತ್ರೆ ಮಂಡ್ಯ ನಗರದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆಯೆ ?

ಆ) ಹಾಗಿದ್ದಲ್ಲಿ ಇದರ ವಿವರಗಳೇನು ?

ಡಾ॥ ಎ.ಬಿ.ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹೌದು.

ಆ) ಮಂಡ್ಯ ಜಿಲ್ಲಾ ಸಾರ್ವಜನಿಕ ಆಸ್ಪತ್ರೆಯನ್ನು 310 ಹಾಸಿಗೆಗಳಿಂದ 400 ಹಾಸಿಗೆಗಳ ಆಸ್ಪತ್ರೆಯಾಗಿ ವಿಸ್ತರಿಸುವ ಹಾಗೂ ನವೀಕರಿಸುವ ಕಾಮಗಾರಿಯು ಕರ್ನಾಟಕ ಆರೋಗ್ಯ ವ್ಯವಸ್ಥೆಗಳ ಅಭಿವೃದ್ಧಿ ಯೋಜನೆಯಡಿ ಒಟ್ಟು ರೂ. 477.28 ಲಕ್ಷ ವೆಚ್ಚದಲ್ಲಿ ಕೈಗೊಳ್ಳಲಾಗಿದೆ. ಇದರಲ್ಲಿ ಅಪಘಾತ ತುರ್ತು